**Akashvani : Bangalore**
**Regional Bulletin In Kannada**
**22.02.2025 / 18.40 hrs**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ
ಮುಖ್ಯಾಂಶಗಳು

**೧. ರಾಜ್ಯದ ಜಿಲ್ಲಾಸ್ಪತ್ರೆಗಳಲ್ಲಿ ಡೇ-ಕೇರ್, ಕಿಮೊಥೆರಪಿ ಕೇಂದ್ರ ಸ್ಥಾಪನೆಗೆ ಸರ್ಕಾರದ ನಿರ್ಧಾರ**

**೨. ದೇಶದ ಪ್ರಗತಿಗೆ ಶಿಕ್ಷಣ ಭದ್ರ ಬುನಾದಿ - ಮೇಘಾಲಯ ರಾಜ್ಯಪಾಲ ಸಿ.ಎಚ್. ವಿಜಯಶಂಕರ**

**೩. ಮಕ್ಕಳಲ್ಲಿ ರಾಷ್ಟ್ರಪ್ರೇಮ ಬೆಳೆಸುವ ಸ್ಕೌಟ್ಸ್, ಗೈಡ್ಸ್ ಅನುಷ್ಠಾನದಲ್ಲಿ ಕರ್ನಾಟಕ ಮುಂಚೂಣಿ**

**೪. ಮಹಿಳಾ ಪ್ರೀಮಿಯರ್ ಲೀಗ್ ಕ್ರಿಕೆಟ್: ಡೆಲ್ಲಿ ಕ್ಯಾಪಿಟಲ್ಸ್-ಯುಪಿ ವಾರಿಯರ್ಸ್ ಹಣಾಹಣಿ**

**<><*<><>*><>**

ರಾಜ್ಯದ ಎಲ್ಲಾ ಜಿಲ್ಲಾಸ್ಪತ್ರೆಗಳಲ್ಲಿ ಡೇ-ಕೇರ್ ಮತ್ತು ಕಿಮೊಥೆರಪಿ ಸೌಲಭ್ಯ ಕಲ್ಪಿಸಲಾಗುವುದು ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ. ವಿಜಯಪುರ ಜಿಲ್ಲಾಸ್ಪತ್ರೆಗೆ ಭೇಟಿ ನೀಡಿ, ಕಿಮೊಥೆರಪಿ ಕೇಂದ್ರ ಉದ್ಘಾಟಿಸಿ ಅವರು ಮಾತನಾಡಿದರು. ಈಗಾಗಲೇ ವಿಜಯಪುರ ಮತ್ತು ರಾಯಚೂರು ಜಿಲ್ಲೆಯಲ್ಲಿ ಕೇಂದ್ರ ಸ್ಥಾಪಿಸಲಾಗಿದ್ದು, ಮುಂಬರುವ ದಿನಗಳಲ್ಲಿ ಇದನ್ನು ಎಲ್ಲ ಜಿಲ್ಲಾಸ್ಪತ್ರೆಗಳಿಗೂ ವಿಸ್ತರಿಸಲಾಗುವುದು. ಪ್ರಾಥಮಿಕ ಹಂತದಲ್ಲಿ ಸ್ತನ ಕ್ಯಾನ್ಸರ್ ಪತ್ತೆ ಹಚ್ಚಿದಲ್ಲಿ ಗುಣಪಡಿಸಬಹುದಾಗಿದೆ. ಈ ನಿಟ್ಟಿನಲ್ಲಿ ಪ್ರಾಥಮಿಕ ಹಂತದಲ್ಲಿಯೇ ರೋಗ ಪತ್ತೆ ಹಚ್ಚಲು ಅವಶ್ಯಕವಿರುವ ಅತ್ಯಧುನಿಕ ವೈದ್ಯಕೀಯ ಯಂತ್ರೋಪಕರಣಗಳನ್ನು ಜಿಲ್ಲಾಸ್ಪತ್ರೆಗಳಲ್ಲಿ ಅಳವಡಿಸಲಾಗಿದೆ ಎಂದು ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

**<><*<><>*><>**

ರಾಜ್ಯದ ಶ್ರೀಮಂತ ಕಲಾ ಪರಂಪರೆ ಹೊಂದಿರುವ ಹಾಗೂ ವಿಶ್ವ ಪಾರಂಪರಿಕ ತಾಣವಾದ ಹಂಪಿಯ ಐತಿಹಾಸಿಕ ತಾಣಗಳಿಗೆ ವಿದೇಶಿ ಹೂಡಿಕೆದಾರರು ಇಂದು ಭೇಟಿ ನೀಡಿದ್ದಾರೆ. ಹಂಪಿಯ ಪ್ರಸಿದ್ಧ ಸ್ಥಳಗಳಾದ ವಿಜಯ ವಿಠ್ಠಲ ದೇವಸ್ಥಾನ, ಕಲ್ಲಿನ ರಥ, ಸಂಗೀತ ಮಂಟಪ, ಗಜಶಾಲೆ, ರಾಣಿ ಸ್ನಾನಗೃಹವನ್ನು ವೀಕ್ಷಿಸಿದರು. ನಿಯೋಗದಲ್ಲಿ ಆಸ್ಟ್ರೇಲಿಯಾ, ರಷ್ಯಾ, ಅಮೆರಿಕ, ಮಲೇಷಿಯಾ, ಫಿಲಿಫೈನ್ಸ್, ಶ್ರೀಲಂಕಾ, ಇಟಲಿ ದೇಶಗಳ ಹೂಡಿಕೆದಾರರು ಭಾಗಿಯಾಗಿದ್ದರು.

<><*<><>*><>

ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ದೊರಕಬೇಕು ಎಂದು ಮೇಘಾಲಯದ ರಾಜ್ಯಪಾಲ ಸಿ.ಎಚ್. ವಿಜಯಶಂಕರ್ ಹೇಳಿದ್ದಾರೆ. ಕೊಪ್ಪಳದಲ್ಲಿ ದಿವ್ಯಾಂಗ ಮಕ್ಕಳ ಶಾಲೆಗೆ ಭೇಟಿ ನೀಡಿದ ನಂತರ, ಅವರು ಈ ವಿಷಯ ತಿಳಿಸಿದರು. ದೇಶದ ಪ್ರಗತಿಗೆ ಶಿಕ್ಷಣ, ಭದ್ರ ಬುನಾದಿಯಾಗಿದೆ. ಮಕ್ಕಳಿಗೆ ಗುಣಮಟ್ಟದ ಶಿಕ್ಷಣದ ಜೊತೆಗೆ ಗುಣಮಟ್ಟದ ಪೌಷ್ಠಿಕ ಆಹಾರವು ಅಷ್ಟೇ ಮುಖ್ಯವಾಗಿದೆ ಎಂದು ಹೇಳಿದರು. ಕೆಲವೊಂದು ಮಕ್ಕಳಿಗೆ ಅಂಗವೈಕಲ್ಯ ಅನುವಂಶೀಯವಾಗಿ ಬರುತ್ತದೆ. ಅಂತಹ ಮಕ್ಕಳನ್ನು ಗುರುತಿಸಿ ಅವರಿಗೆ ಉತ್ತಮ ಚಿಕಿತ್ಸೆ ನೀಡುವ ಮೂಲಕ ಅವರನ್ನು ಸಮಾಜದ ಮುಖ್ಯವಾಹಿನಿಗೆ ಕರತರಲು ವೈದ್ಯಕೀಯ ಸಮುದಾಯ ಹೆಚ್ಚಿನ ಕಾಳಜಿ ತೋರಬೇಕು ಎಂದು ಹೇಳಿದರು. ಇದೇ ಸಂದರ್ಭದಲ್ಲಿ ರಾಜ್ಯಪಾಲರು ಕೊಪ್ಪಳ ಜಿಲ್ಲೆಗೆ ಪದ್ಮಪ್ರಶಸ್ತಿ ತಂದುಕೊಟ್ಟ ಭೀಮವ್ವ ಸಿಳ್ಳೆಕ್ಯಾತ ಅವರ ನಿವಾಸಕ್ಕೆ ಭೇಟಿ ನೀಡಿ ಅವರನ್ನು ಸನ್ಮಾನಿಸಿದರು.

<><*<><>*><>

ಧಾರವಾಡ ಕೈಗಾರಿಕಾ ಪ್ರದೇಶಗಳಿಗೆ ಹಿಡಕಲ್ ಜಲಾಶಯದಿಂದ ನೀರು ಪೂರೈಸುವ ಬಗ್ಗೆ ಸರ್ಕಾರ ತೀರ್ಮಾನ ತೆಗೆದುಕೊಳ್ಳಲಿದೆ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದ್ದಾರೆ. ಧಾರವಾಡ ಜಿಲ್ಲೆಯ ನವಲಗುಂದ ತಾಲೂಕಿನ ಅಪ್ಪಾಜಿ ಕಲ್ಯಾಣ ಕೇಂದ್ರದಲ್ಲಿ ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡಿ, ಅವರು ಮಾತನಾಡಿದರು. ಸರ್ಕಾರದ ಎಲ್ಲಾ ಯೋಜನೆಗಳ ಲಾಭವನ್ನು ಈ ಭಾಗದ ಜನರಿಗೆ ತಲುಪಿಸಲು ಕೋನಾರೆಡ್ಡಿ ವಿಶೇಷ ಪ್ರಯತ್ನ ಮಾಡುತ್ತಿದ್ದಾರೆ ಎಂದು ಹೇಳಿದರು.

<><*<><>*><>

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್' ನಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ, ನಾಳೆ ಬೆಳಗ್ಗೆ ೧೧ ಗಂಟೆಗೆ ದೇಶ-ವಿದೇಶಗಳಲ್ಲಿರುವ ಭಾರತೀಯರೊಂದಿಗೆ ತಮ್ಮ ಅನಿಸಿಕೆ ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್' ನ ೧೧೯ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಬಿತ್ತರಗೊಳ್ಳಲಿದೆ. ಅಲ್ಲದೇ, ಎಐಆರ್ ನ್ಯೂಸ್, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಾರ್ಯಾಲಯ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿ ನೇರ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಪ್ರಧಾನಿ ಅವರ ಭಾಷಣ ಪ್ರಸಾರವಾಗಲಿದೆ.

<><*<><>*><>

ವಿದ್ಯಾರ್ಥಿಗಳಲ್ಲಿ ಶಿಸ್ತು, ರಾಷ್ಟ್ರಪ್ರೇಮ ಬೆಳೆಸುವ ಸ್ಕೌಟ್ಸ್ ಮತ್ತು ಗೈಡ್ಸ್ ಅನುಷ್ಠಾನದಲ್ಲಿ ಕರ್ನಾಟಕ ದೇಶದಲ್ಲೇ ಮೊದಲ ಸ್ಥಾನದಲ್ಲಿದೆ ಎಂದು ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ರಾಜ್ಯ ಮುಖ್ಯ ಆಯುಕ್ತ ಪಿ.ಜಿ.ಆರ್. ಸಿಂಧ್ಯಾ ಹೇಳಿದ್ದಾರೆ. ಬೆಂಗಳೂರಿನಲ್ಲಿ ನಡೆದ ಸಮಾರಂಭದಲ್ಲಿ ಉತ್ತಮ ಶಿಕ್ಷಕ, ಶಿಕ್ಷಕಿ ಪ್ರಶಸ್ತಿ ಪಡೆದ ಸ್ಕೌಟ್ಸ್ ಮತ್ತು ಗೈಡ್ಸ್‌ಗಳಿಗೆ ಪ್ರಮಾಣ ಪತ್ರ ವಿತರಿಸಿ ಅವರು ಮಾತನಾಡಿದರು. ಭಾರತ್ ಗೈಡ್ಸ್ ಕರ್ನಾಟಕ ರಾಜ್ಯ ಆಯುಕ್ತ ಗೀತಾ ನಟರಾಜ್ ಮೊದಲಾದವರು ಭಾಗಿಯಾಗಿದ್ದರು.

**<><*<><>*><>**

ಕೇಂದ್ರ ಬಜೆಟ್, ಅಭಿವೃದ್ಧಿಗೆ ಪೂರಕವಾಗಿದೆ ಎಂದು ಸಂಸದ ಎಂ. ಮಲ್ಲೇಶ್ ಬಾಬು ಹೇಳಿದ್ದಾರೆ. ಕೋಲಾರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಣ್ಣ ಕೈಗಾರಿಕೆಗಳ ಉತ್ತೇಜನಕ್ಕೆ ಹಲವು ಕ್ರಮ ಕೈಗೊಳ್ಳಲಾಗಿದೆ. ರೈತರು, ಮಹಿಳೆಯರು, ಯುವಕರಿಗೆ ಹೆಚ್ಚಿನ ಅನುಕೂಲವಾಗುವಂತಹ ಯೋಜನೆಗಳಿವೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ರಫ್ತಿಗೆ ಆದ್ಯತೆ ನೀಡಿರುವುದರಿಂದ, ರೈತರಿಗೆ ಅನುಕೂಲವಾಗಲಿದ್ದು, ಇದರಿಂದ ಆರ್ಥಿಕ ಪ್ರಗತಿ ಸಾಧಿಸಬಹುದಾಗಿದೆ ಎಂದು ಹೇಳಿದರು. ಮಾಜಿ ಸಂಸದ ಎಸ್. ಮುನಿಸ್ವಾಮಿ ಮಾತನಾಡಿ, ಕಳೆದ ೨ ವರ್ಷಗಳಲ್ಲಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಕೈಗೊಂಡ ಅಭಿವೃದ್ಧಿ ಕಾರ್ಯಗಳ ಬಗ್ಗೆ ಶ್ವೇತಪತ್ರ ಹೊರಡಿಸಬೇಕೆಂದು ಒತ್ತಾಯಿಸಿದರು.

**<><*<><>*><>**

ಹಾಲಿನ ಬೆಲೆ ಹೆಚ್ಚಳದ ಬಗ್ಗೆ ಸರ್ಕಾರ ಯಾವುದೇ ತೀರ್ಮಾನ ತೆಗೆದುಕೊಂಡಿಲ್ಲ ಎಂದು ಕೆಎಂಎಫ್ ಅಧ್ಯಕ್ಷ ಭೀಮಾನಾಯ್ಕ್ ಸ್ಪಷ್ಟಪಡಿಸಿದ್ದಾರೆ. ಬಳ್ಳಾರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಲೀಟರ್‌ಗೆ ೫ ರೂಪಾಯಿ ಹೆಚ್ಚಿಸಬೇಕೆಂದು ಕೆಎಂಎಫ್, ಸರ್ಕಾರಕ್ಕೆ ಸಲಹೆ ಮಾಡಿದೆ. ಈ ಸಂಬಂಧ ಸರ್ಕಾರ, ಅಧಿಕಾರಿಗಳೊಂದಿಗೆ ಸಾಧಕ-ಬಾಧಕ ಪರಿಶೀಲಿಸಿ ತೀರ್ಮಾನ ಕೈಗೊಳ್ಳಲಿದೆ ಎಂದರು. ಹಾಲಿನ ದರ ಹೆಚ್ಚಿಸುವಂತೆ ರೈತರು, ವಿವಿಧ ಸಂಘಟನೆಗಳು ಮತ್ತು ಪಶು ಸಂಗೋಪನಾ ಇಲಾಖೆಯಿಂದ ಒತ್ತಡ ಬರುತ್ತಿದೆ. ಆದರೂ ರಾಜ್ಯ ಸರ್ಕಾರ ದರ ಏರಿಕೆ ವಿಚಾರದಲ್ಲಿ ಇನ್ನೂ ಯಾವುದೇ ಅಂತಿಮ ನಿರ್ಧಾರಕ್ಕೆ ಬಂದಿಲ್ಲ ಎಂದು ಕೆಎಂಎಫ್ ಅಧ್ಯಕ್ಷರು ಸ್ಪಷ್ಟ ಪಡಿಸಿದರು.

**<><*<><>*><>**

ರಾಜ್ಯ ಸಾಲದ ಸುಳಿಗೆ ಸಿಲುಕಿದೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಆಪಾದಿಸಿದ್ದಾರೆ. ಹುಬ್ಬಳ್ಳಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಳೆದ ೨ ವರ್ಷಗಳಿಂದಲೂ ಕೊರತೆ ಬಜೆಟ್ ಮಂಡಿಸಲಾಗುತ್ತಿದೆ. ಕಳೆದ ವರ್ಷ ೧೫ ಸಾವಿರ ಕೋಟಿ ಹೆಚ್ಚುವರಿಯಾಗಿ ಸಾಲ ಮಾಡಿದ್ದಾರೆ. ಸರ್ಕಾರದ ಗ್ಯಾರಂಟಿ ಯೋಜನೆಗಳಿಗೆ ಹಣ ಬಿಡುಗಡೆ ಮಾಡುತ್ತಿಲ್ಲ. ಇದರಿಂದಾಗಿ ಜನ ಸಾಮಾನ್ಯರು ಅನೇಕ ತೊಂದರೆ ಎದುರಿಸುತ್ತಿದ್ದಾರೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

<><*<><>*><>

ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯ ೧೯ನೇ ಕಂತಿನ ಹಣವನ್ನು ಸೋಮವಾರ ಬಿಡುಗಡೆ ಮಾಡಲಾಗುವುದು. ಬಿಹಾರದ ಬಾಗಲ್ಪುರದಲ್ಲಿ ನಡೆಯುವ ಸಮಾರಂಭದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ೯ ಕೋಟಿ ೮೦ ಲಕ್ಷ ರೈತರ ಖಾತೆಗಳಿಗೆ ೨೨ ಸಾವಿರ ಕೋಟಿ ಹಣ ಜಮೆ ಮಾಡಲಿದ್ದಾರೆ. ೨೦೧೯ನೇ ಸಾಲಿನಲ್ಲಿ ಈ ಯೋಜನೆಗೆ ಚಾಲನೆ ನೀಡಿದ್ದು, ರೈತರು ಕೃಷಿ ಚಟುವಟಿಕೆಗಳಾದ ಬೀಜ, ಕೀಟನಾಶಕ, ರಸಗೊಬ್ಬರ ಖರೀದಿಗೆ ಈ ಯೋಜನೆ ನೆರವಾಗಲಿದೆ.

<><*<><>*><>

ಮಹಿಳಾ ಪ್ರೀಮಿಯರ್ ಲೀಗ್ ಕ್ರಿಕೆಟ್ ಪಂದ್ಯದಲ್ಲಿ ಇಂದು ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ಹಾಗೂ ಯುಪಿ ವಾರಿಯರ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಇಂದು ಸಂಜೆ ೭.೩೦ ಕ್ಕೆ ಆರಂಭವಾಗಲಿದೆ.

<><*<><>*><>

ಭಾರತ ಮತ್ತು ಬಾಂಗ್ಲಾದೇಶ ನಡುವಿನ ಐದು ಪಂದ್ಯಗಳ ಟಿ-೨೦ ಪುರುಷರ ಅಂಧರ ಕ್ರಿಕೆಟ್ ಸರಣಿಯ ಮೊದಲ ಪಂದ್ಯದಲ್ಲಿ ಭಾರತ ೭ ವಿಕೆಟ್‌ಗಳ ಭರ್ಜರಿ ಗೆಲುವು ಸಾಧಿಸಿದೆ. ಬೆಂಗಳೂರಿನಲ್ಲಿಂದು ನಡೆದ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಬಾಂಗ್ಲಾದೇಶ ತಂಡ ನಿಗದಿತ ೨೦ ಓವರ್‌ಗಳಲ್ಲಿ ಎಲ್ಲಾ ವಿಕೆಟ್ ಕಳೆದುಕೊಂಡು ೧೩೧ ರನ್ ಗಳಿಸಿತು. ಗುರಿ ಬೆನ್ನತ್ತಿದ ಭಾರತ ತಂಡ, ೧೩.೩ ಓವರ್‌ಗಳಲ್ಲಿ ಕೇವಲ ೩ ವಿಕೆಟ್ ನಷ್ಟಕ್ಕೆ ೧೩೨ ರನ್ ಗಳಿಸಿ ಗೆಲುವಿನ ನಗೆ ಬೀರಿತು.

<><*<><>*><>

ಇನ್ನು ಹವಾವರ್ತಮಾನ,

ಉತ್ತರ ಒಳನಾಡಿನ ಹಲವೆಡೆ ಚದುರಿದಂತೆ ಮಳೆಯಾಗಿದೆ. ಕರಾವಳಿ ಮತ್ತು ದಕ್ಷಿಣ ಒಳನಾಡಿನಲ್ಲಿ ಒಣಹವೆ ಮುಂದುವರೆದಿದೆ. ಮುನ್ಸೂಚನೆಯಂತೆ ಮುಂದಿನ ೨೪ ಗಂಟೆಗಳಲ್ಲಿ ದಕ್ಷಿಣಕನ್ನಡ, ಉಡುಪಿ, ಹಾಸನ, ಚಿಕ್ಕಮಗಳೂರು, ಕೊಡಗು ಜಿಲ್ಲೆಗಳಲ್ಲಿ ಹಗುರ ಮಳೆಯಾಗುವ ಸಾಧ್ಯತೆಯಿದೆ. ಉಳಿದಂತೆ ರಾಜ್ಯಾದ್ಯಂತ ಒಣಹವೆ ಮುಂದುವರೆಯಲಿದೆ. ಬೆಂಗಳೂರು ಸುತ್ತಮುತ್ತ ಭಾಗಶಃ ಮೋಡಕವಿದ ವಾತಾವರಣ. ಗರಿಷ್ಠ ೩೩, ಕನಿಷ್ಠ ೧೮ ಡಿಗ್ರಿ ಸೆಲ್ಸಿಯೆಸ್ ತಾಪಮಾನ ಸಂಭವ.

**<><*<><>*><>**

ದೇಶದ ಅಭಿವೃದ್ಧಿಗೆ ಕೃಷಿ ವಲಯದ ಪಾತ್ರ ಮುಖ್ಯವಾಗಿದೆ ಎಂದು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಪ್ರತಿಪಾದಿಸಿದ್ದಾರೆ. ನವದೆಹಲಿಯಲ್ಲಿಂದು ಆರಂಭವಾದ ಕೃಷಿ ವಿಜ್ಞಾನ ಮೇಳ-೨೦೨೫ಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಪ್ರಧಾನಿ ನರೇಂದ್ರ ಮೋದಿ, ನೇತೃತ್ವದಲ್ಲಿ ದೇಶವನ್ನು ವಿಕಸಿತ ಭಾರತವಾಗಿಸುವ ಅಭಿಯಾನ ಮುಂದುವರಿದಿದೆ. ಹಾಗೆಯೇ ವಿಕಸಿತ ಭಾರತದ ಸಾಕಾರ, ಕೃಷಿ ವಲಯ ಹಾಗೂ ರೈತರ ಸಹಕಾರವಿಲ್ಲದೆ ಸಾಧ್ಯವಿಲ್ಲ. ಇಂದೂ ಕೂಡ ಕೃಷಿ, ದೇಶದ ಆರ್ಥಿಕತೆಯ ಬೆನ್ನೆಲುಬಾಗಿದೆ ಎಂದು ಹೇಳಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**